# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 419(457ಎ) |
| ಸದಸ್ಯರ ಹೆಸರು | : | ಡಾ: ಕೆ.ಗೋವಿಂದರಾಜ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 15.09.2022 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಇತ್ತೀಚಿಗೆ ಮೂವರನ್ನು ಈ ಲಾರಿಗಳು ಬಲಿ ಪಡೆದುಕೊಂಡಿದ್ದು ಅರಮನೆ ಮೈದಾನ ಬಳಿ ಕೆ.ಎಸ್.ಆರ್.ಟಿ.ಸಿ ಬಸ್ ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಮಹಿಳಾ ಸವಾರರೊಬ್ಬರು ಪ್ರಾಣ ಕಳೆದ ಕೊಂಡಿದ್ದು ಈ ಅಪಘಾತಗಳನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? | ಅರಮನೆ ಮೈದಾನದ ಬಳಿ ಮಾರಣಾಂತಿಕ ಅಪಘಾತಗಳನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮದ ವಿವರ ಈ ಕೆಳಕಂಡಂತಿರುತ್ತದೆ.<br><br>• ಮಾನ್ಯ ಸರ್ವೋಚ್ಛ ನ್ಯಾಯಾಲಯದ ನಿರ್ದೇಶನದಂತೆ ವೈಜ್ಞಾನಿಕ ತಂಡ ರಚಿಸಿ ತಂಡದ ಸದಸ್ಯರುಗಳಾದ ಬಿ.ಬಿ.ಎಂ.ಪಿ ಅಭಿಯಂತರರು, ಆರ್.ಟಿ.ಓ ಅಧಿಕಾರಿಗಳು ಹಾಗೂ ಪೊಲೀಸ್ ನಿರೀಕ್ಷಕರನ್ನು ಒಳಗೊಂಡ ತಂಡದಿಂದ ಸ್ಥಳ ಪರಿವೀಕ್ಷಣೆಯನ್ನು ನಡೆಸಿ ಅಪಘಾತಕ್ಕೆ ಕಾರಣವಾಗಿರುವ ಅಂಶಗಳನ್ನು ಅವಲೋಕಿಸಿ, ಅಪಘಾತಗಳು ಸಂಭವಿಸದಂತೆ ಸುರಕ್ಷತಾ ಕ್ರಮ ಕೈಗೊಳ್ಳಲಾಗಿರುತ್ತದೆ.<br>• ಈ ರಸ್ತೆಯು ಸದಾ ಸಂಚಾರ ದಟ್ಟಣೆ ಹಾಗೂ ಜನನಿಬಿಡ ಪ್ರದೇಶವಾಗಿದ್ದು, ಸೂಕ್ತ ಸಂಚಾರ ಸೂಚನಾ ಫಲಕಗಳನ್ನು ಅಳವಡಿಸಲಾಗಿರುತ್ತದೆ.<br>• ಅರಮನೆ ರಸ್ತೆಯಲ್ಲಿ ಹಾಗೂ ಸುತ್ತಮುತ್ತಲೂ ಹೆಚ್ಚುವರಿ ಸಿಬ್ಬಂದಿಗಳನ್ನು ನಿಯೋಜನೆ ಮಾಡಿ ಸುಗಮ ಸಂಚಾರ ಹಾಗೂ ಅಪಘಾತ ತಡೆಗಟ್ಟಲು ಕ್ರಮ ಕೈಗೊಳ್ಳಲಾಗಿರುತ್ತದೆ.<br>• ಈ ರಸ್ತೆಯಲ್ಲಿ ಮಾರಣಾಂತಿಕ ಅಪಘಾತಕ್ಕೆ ಕಾರಣವಾಗುವ ಅತಿವೇಗದ ಚಾಲನೆಯ ವಿರುದ್ಧ ಹೆಚ್ಚು ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳನ್ನು ದಾಖಲಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ.<br>• ಬಿ.ಎಂ.ಟಿ.ಸಿ/ಕೆ.ಎಸ್.ಆರ್.ಟಿ.ಸಿ ಬಸ್ ಚಾಲಕರಿಗೆ ಸಂಸ್ಥೆಯ ವಾಹನಗಳಿಂದ ಉಂಟಾಗುತ್ತಿರುವ ಹೆಚ್ಚಿನ ಸಂಖ್ಯೆಯ ಅಪಘಾತಗಳ ಕುರಿತು ತಿಳುವಳಿಕೆ ನೀಡಿ ಸಂಚಾರ ನಿಯಮಗಳ ಪಾಲನೆಯ ಮಹತ್ವ ಮತ್ತು ರಸ್ತೆ ಸುರಕ್ಷತೆ ಕುರಿತು ತಿಳುವಳಿಕೆ ಮೂಡಿಸಲು ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಕ್ರಮ ಕೈಗೊಳ್ಳಲಾಗಿರುತ್ತದೆ.<br>• ಸಾರ್ವಜನಿಕರಿಗೆ ಹಾಗೂ ವಾಹನ ಚಾಲಕರಿಗೆ ರಸ್ತೆ ನಿಯಮಗಳನ್ನು ಪಾಲಿಸುವಂತೆ ಜಾಗೃತಿ ಮೂಡಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ. |

ಹೆಚ್‌ಡಿ 522 ಎಸ್‌ಎಸ್‌ಟಿ 2022

(ಆರಗ ಜ್ಞಾನೇಂದ್ರ)
ಗೃಹ ಸಚಿವರು